## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2012-13ನೇ ಆರ್ಥಿಕ ಸಾಲಿನಲ್ಲಿ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ ಅನುಷ್ಠಾನದ ಸಂಬಂಧ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು

**ಓದಲಾಗಿದೆ :** ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ ಇವರ ಅನುದಾನ ಬಿಡುಗಡೆ ಆದೇಶ ಸಂಖ್ಯೆ: ಕೆ-11011/1/2013/ಡಿಪಿಐ, ದಿನಾಂಕ:26.03.2013

**ಪ್ರಸ್ತಾವನೆ :**

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಕ್ರಮವಾಗಿ ಶೇಖಡ 75 : 25ರ ಅನುಪಾತದಲ್ಲಿ ಅನುದಾನವನ್ನು ಒದಗಿಸುವುದರ ಮೂಲಕ "ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ"ಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. 2012-13ನೇ ಆರ್ಥಿಕ ಸಾಲಿನಲ್ಲಿ ಯೋಜನೆಯ ಅನುಷ್ಠಾನಕ್ಕಾಗಿ ಒಟ್ಟು ರೂ.303.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ ಶೇಖಡ 75ರಷ್ಟು ಅನುದಾನವಾದ ರೂ.227.25 ಲಕ್ಷಗಳನ್ನು ಪಂಚಾಯತ್ ರಾಜ್ ಮಂತ್ರಾಲಯವು ಓದಲಾದ ಆದೇಶದ ಮೂಲಕ ರಾಜ್ಯಕ್ಕೆ ಬಿಡುಗಡೆಗೊಳಿಸಿ ಆದೇಶಿಸಿರುತ್ತದೆ. ಶೇಖಡ 25ರಷ್ಟು ಅನುದಾನವಾದ ರೂ.75.75 ಲಕ್ಷಗಳನ್ನು ರಾಜ್ಯ ಸರ್ಕಾರವು ಬಿಡುಗಡೆಗೊಳಿಸಿ ಯೋಜನೆ ಅನುಷ್ಠಾನಕ್ಕೆ ಸಹಕಾರ ನೀಡಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅನುದಾನ ಲೆಕ್ಕಶೀರ್ಷಿಕೆ 2515-00-101-0-09-101 (ಯೋಜನೆ) ರಡಿ 2012-13ನೇ ಆರ್ಥಿಕ ಸಾಲಿಗೆ ಆಯವ್ಯಯದಲ್ಲಿ ಹಂಚಿಕೆ ಮಾಡಲಾಗಿರುವ ಅನುದಾನದ ಪೈಕಿ ವೆಚ್ಚ ಭರಿಸಿ ರೂ.75.75 ಲಕ್ಷಗಳನ್ನು ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 139 ಜಿಪಸ 2012(ಪಿ3), ಬೆಂಗಳೂರು, ದಿನಾಂಕ:28.03.2013</u>**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, 2012-13ನೇ ಆರ್ಥಿಕ ಸಾಲಿನಲ್ಲಿ "ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ" ಅನುಷ್ಠಾನಕ್ಕೆ ರಾಜ್ಯದ ಪಾಲಾದ ಶೇಖಡ 25ರಷ್ಟು ಅನುದಾನ **ರೂ.75.75 ಲಕ್ಷಗಳನ್ನು (ರೂಪಾಯಿ ಎಪ್ಪತ್ತೈದು ಲಕ್ಷದ ಎಪ್ಪತ್ತೈದು ಸಾವಿರ ಮಾತ್ರ)** ಕರ್ನಾಟಕ ಪಂಚಾಯತ್ ರಾಜ್ ಅನುದಾನ ಲೆಕ್ಕಶೀರ್ಷಿಕೆ **2515-00-101-0-09-101** (ಯೋಜನೆ) ರಡಿ ವೆಚ್ಚ ಭರಿಸಲು ಮಂಜೂರಾತಿ ನೀಡಲಾಗಿದೆ. ಈ ಅನುದಾನವನ್ನು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿಂದ ಪೇಯಿಸ್ ರಸೀದಿ ಮೇಲೆ ಸೆಳೆಯಲು ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರನ್ನು ಪ್ರಾಧಿಕಾರವನ್ನಾಗಿ ಮಾಡಿ ಆದೇಶಿಸಿದೆ.

ರೂ.75.75 ಲಕ್ಷಗಳನ್ನು (ರೂಪಾಯಿ ಎಪ್ಪತ್ತೈದು ಲಕ್ಷದ ಎಪ್ಪತ್ತೈದು ಸಾವಿರ ಮಾತ್ರ) "ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ"ಗಾಗಿ ದೇನಾ ಬ್ಯಾಂಕ್, ಇಂದಿರಾನಗರ ಶಾಖೆ, ಬೆಂಗಳೂರು ಇಲ್ಲಿ ತೆರೆಯಲಾಗಿರುವ ಸಂಖ್ಯೆ : 052110026480 ಉಳಿತಾಯ ಖಾತೆಗೆ ಜಮೆಮಾಡುವುದು.

ಸಂಖ್ಯೆ:ಆಇ 217 ವೆ-06:2013, ದಿನಾಂಕ:28.03.2013ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿ ಅನುಸಾರ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

( ಮಾರ್ಗರೇಟ್ ಆಲಿನಾ ನರೋನ್ಹಾ ) 28/3/13

ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.),

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

28/3/13

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
4. ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.